# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪಸಿಂಹ ನಾಯಕ್ ಕೆ. ಇವರ ನಿಯಮ 330 ರ ಸೂಚನೆಗೆ ಉತ್ತರ:

## ಸೂಚನೆ:

ರಾಜ್ಯದಲ್ಲಿ ಅನೇಕ ವರ್ಷಗಳಿಂದ "ರಾಣೆಯಾರ್" ಸಮುದಾಯವು ಪರಿಶಿಷ್ಟ ಜಾತಿ ಮೀಸಲಾತಿ ನಿಯಮದಡಿ ಸೌಲಭ್ಯಗಳನ್ನು ಪಡೆದುಕೊಂಡಿರುತ್ತದೆ. ಆದರೆ ಕಳೆದ 3-4 ವರ್ಷಗಳಿಂದ ನಿಗಮಗಳಿಂದ "ರಾಣೆಯಾರ್" ಸಮುದಾಯವನ್ನು ತೆಗೆದು ಹಾಕಲಾಗಿರುವುದರಿಂದ ಈ ಸಮುದಾಯಕ್ಕೆ ಯಾವುದೇ ನಿಗಮದಿಂದಲೂ ಸೌಲಭ್ಯಗಳು ದೊರೆಯದೆ, ಸಮುದಾಯ ತೀವ್ರ ಸಂಕಷ್ಟಕ್ಕೆ ಒಳಗಾಗಿದೆ. "ರಾಣೆಯಾರ್" ಸಮುದಾಯದ ಹೆಸರು ಈ ಹಿಂದೆ "ಅಂಬೇಡ್ಕರ್ ಅಭಿವೃದ್ಧಿ ನಿಗಮ"ದಲ್ಲಿ ದಾಖಲಾಗಿದ್ದನ್ನು ತೆಗೆದು ಹಾಕಲಾಗಿದೆ.

ಕೂಲಿ ಕಾರ್ಮಿಕರಾಗಿ ದುಡಿದು, ಅತ್ಯಂತ ಬಡತನದಲ್ಲಿಯೇ ಜೀವನ ಸಾಗಿಸುತ್ತಿರುವ "ರಾಣೆಯಾರ್' ಸಮುದಾಯವನ್ನು ಪರಿಶಿಷ್ಟ ಜಾತಿ/ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರುಸೇರ್ಪಡೆಗೊಳಿಸಲು ಯಾವುದೇ ಕ್ರಮ ವಹಿಸದೇ ಇರುವುದರಿಂದ "ರಾಣೆಯಾರ್" ಸಮುದಾಯವು ಸರ್ಕಾರದ ಹಲವಾರು ಸವಲತ್ತುಗಳಿಂದ ವಂಚಿತರಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

## ಉತ್ತರ:

ರಾಣೆಯಾರ್ ಸಮುದಾಯವು ಪರಿಶಿಷ್ಟ ಜಾತಿ ಪಟ್ಟಿಯ ಕ್ರ.ಸಂ.(92)ರಲ್ಲಿ ನಮೂದಿಸಲಾಗಿರುತ್ತದೆ. ಸದರಿ ಸಮುದಾಯವನ್ನು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯಲು ನಿಗಮದ ವ್ಯಾಪ್ತಿಯಲ್ಲಿ ಸೇರಿಸಲಾಗಿದೆ. ಅದರಂತೆ, 2024-25ನೇ ಸಾಲಿಗೆ ಸದರಿ ರಾಣೆಯಾರ್ ಸಮುದಾಯದವರು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ/ಸಹಾಯಧನ ಸೌಲಭ್ಯ ಪಡೆಯುಲು ಸೇವಾಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಸಮುದಾಯದ ಫಲಾನುಭವಿಗಳು ನಿಗಮದಲ್ಲಿನ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿ ಸಾಲ/ಸಹಾಯಧನ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ.

**ಸಕಇ 528 ಎಸ್ ಎಲ್ ಪಿ 2024**

(ಡಾ. ಹೆಚ್.ಸಿ ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು